**ಕರ್ನಾಟಕ ಸರ್ಕಾರ**
**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು,**
**ಕೆ.ಜಿ.ರಸ್ತೆ, ಬೆಂಗಳೂರು-560 009**

ಸಂಖ್ಯೆ: ಸಿಎಸಿ-04/ TET-2022/01/2021-22 ದಿನಾಂಕ:14-12-2022

## ಪ್ರಕಟಣೆ

ಸಾರ್ವಜನಿಕ ಶಿಕ್ಷಣ ಇಲಾಖೆಯ ಕೇಂದ್ರೀಕೃತ ದಾಖಲಾತಿ ಘಟಕದಿಂದ 2022ರ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು (KARTET-2022) ದಿನಾಂಕ:06/11/2022 ರಂದು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ನಡೆಸಲಾಯಿತು. ಅರ್ಹತಾ ಪರೀಕ್ಷೆ ಪತ್ರಿಕೆ-1 (1 ರಿಂದ 5 ನೇ ತರಗತಿ ಬೋಧಿಸುವ ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಕರಿಗಾಗಿ) ಮತ್ತು ಪತ್ರಿಕೆ -2 (6 ರಿಂದ 8ನೇ ತರಗತಿ ಬೋಧಿಸುವ ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರಿಗಾಗಿ) ನಡೆಸಲಾಯಿತು. ಸದರಿ ಪರೀಕ್ಷೆಯ ಪತ್ರಿಕೆ-1ಕ್ಕೆ 1,40,790 ಅಭ್ಯರ್ಥಿಗಳು ಹಾಜರಾಗಿದ್ದು, 20070 ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ ಮತ್ತು ಪತ್ರಿಕೆ-2ಕ್ಕೆ 1,92,066 ಅಭ್ಯರ್ಥಿಗಳು ಹಾಜರಾಗಿದ್ದು, 41857 ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ. ಪತ್ರಿಕೆ-1 ಮತ್ತು ಪತ್ರಿಕೆ-2ರಲ್ಲಿ ಪರೀಕ್ಷೆಗೆ ಹಾಜರಾದ ಒಟ್ಟು 3,32,856 ಅಭ್ಯರ್ಥಿಗಳಲ್ಲಿ 61,927 ಅಭ್ಯರ್ಥಿಗಳು ಅರ್ಹತೆ ಪಡೆದಿರುತ್ತಾರೆ.

2022ರ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯು ಭಾಷೆ-1 ಮತ್ತು ಭಾಷೆ-2 ರಲ್ಲಿ **ಎಂಟು** ಭಾಷೆಗಳನ್ನು (ಕನ್ನಡ, ಇಂಗ್ಲೀಷ್, ಉರ್ದು, ತಮಿಳು, ತೆಲುಗು, ಮರಾಠಿ, ಹಿಂದಿ ಮತ್ತು ಸಂಸ್ಕೃತ) ಹಾಗೂ ಐಚ್ಛಿಕ ವಿಷಯದ ಪತ್ರಿಕೆಗಳು **ಏಳು** ಭಾಷಾ ಮಾಧ್ಯಮಗಳನ್ನು (ಕನ್ನಡ, ಇಂಗ್ಲೀಷ್, ಉರ್ದು, ತಮಿಳು, ತೆಲುಗು, ಮರಾಠಿ, ಮತ್ತು ಹಿಂದಿ) ಒಳಗೊಂಡಿತ್ತು.

2022ರ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ ಕೀ-ಉತ್ತರಗಳನ್ನು **ದಿನಾಂಕ:09/11/2022** ಪ್ರಕಟಗೊಳಿಸಿ, ಅಭ್ಯರ್ಥಿಗಳಿಗೆ ಆನ್‌ಲೈನ್ ಮೂಲಕ ಆಕ್ಷೇಪಣೆಗಳನ್ನು ಸಲ್ಲಿಸಲು ದಿನಾಂಕ:10/11/2022 ರಿಂದ 17/11/2022 ರವರೆಗೆ ಕಾಲಾವಕಾಶ ನೀಡಲಾಗಿತ್ತು. ಕೇಂದ್ರೀಕೃತ ದಾಖಲಾತಿ ಘಟಕದಲ್ಲಿ ಒಟ್ಟು **1332 (ಪತ್ರಿಕೆ-1-75 ಮತ್ತು ಪತ್ರಿಕೆ-2-1257 = ಒಟ್ಟು 1332)** ಆಕ್ಷೇಪಣೆಗಳನ್ನು ಸ್ವೀಕರಿಸಿ, ಪರಿಶೀಲಿಸಲಾಗಿದೆ. ಪ್ರತಿ ವಿಷಯದ ತಜ್ಞರನ್ನೊಳಗೊಂಡ ಸಮಿತಿಯಿಂದ ಆಕ್ಷೇಪಣೆಗಳನ್ನು ಪರಿಶೀಲಿಸಿ, ಸಮಿತಿಯು ನೀಡಿದ ವರದಿಯನ್ನಾಧರಿಸಿ ಅಂತಿಮ ಕೀ-ಉತ್ತರಗಳನ್ನು ದಿನಾಂಕ: 25/11/2022 ರಂದು ಪ್ರಕಟಿಸಿದೆ.

ಕೀ-ಉತ್ತರಗಳನ್ನು ಆಧರಿಸಿ, ಓ.ಎಂ.ಆರ್ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಿ ಫಲಿತಾಂಶಗಳನ್ನು ಲೆಕ್ಕಾಚಾರ ಮಾಡಿದೆ. ಅದರಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ಪತ್ರಿಕೆಗಳಲ್ಲಿ ಶೇ.60 ರಷ್ಟು ಅರ್ಹತಾ ಅಂಕಗಳು ಹಾಗೂ ಪ.ಜಾತಿ, ಪ.ಪಂಗಡ, ಪ್ರವರ್ಗ-1 ಹಾಗೂ ವಿಕಲಚೇತನ ಅಭ್ಯರ್ಥಿಗಳಿಗೆ ಶೇ.55 ರಷ್ಟು ಅರ್ಹತಾ ಅಂಕಗಳನ್ನು ಫಲಿತಾಂಶಕ್ಕೆ ಪರಿಗಣಿಸಿದೆ.

ಕನಿಷ್ಠ ಅರ್ಹತಾ ಅಂಕಗಳನ್ನು ಗಳಿಸಿದ ಅಭ್ಯರ್ಥಿಗಳಿಗೆ **QR Code** ದತ್ತಾಂಶವನ್ನು ಹೊಂದಿರುವ ಗಣಕೀಕೃತ ಅಂಕಪಟ್ಟಿ ವಿತರಿಸಲಾಗುವುದು. ಕೇಂದ್ರೀಕೃತ ದಾಖಲಾತಿ ಘಟಕದಿಂದ ಈ ಸಂಬಂಧ ಮುದ್ರಿತ ಅಂಕಪಟ್ಟಿಯನ್ನು ವಿತರಿಸುವುದಿಲ್ಲ. ಬದಲಾಗಿ ಅಭ್ಯರ್ಥಿಗಳು ವೆಬ್‌ಸೈಟ್‌ನಲ್ಲಿ ನೀಡಲಾದ ಲಿಂಕ್ ಮೂಲಕ ಸುರಕ್ಷತಾ ಕೋಡ್ **(QR Code)** ಹೊಂದಿರುವ ಗಣಕೀಕೃತ ಪ್ರಮಾಣಪತ್ರವನ್ನು ಪಡೆದುಕೊಳ್ಳಬಹುದಾಗಿದೆ.

ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಜಿಸಂಖ್ಯೆ ಮತ್ತು ಅಭ್ಯರ್ಥಿಯ ಜನ್ಮದಿನಾಂಕ (ಆನ್‌ಲೈನ್ ಅರ್ಜಿಯಲ್ಲಿರುವಂತೆ) ನಮೂದಿಸಿ, ಗಣಕೀಕೃತ ಪ್ರಮಾಣಪತ್ರವನ್ನು ಪಡೆದುಕೊಳ್ಳಬಹುದು. ಶಿಕ್ಷಕರ **ಅರ್ಹತಾ ಪ್ರಮಾಣ ಪತ್ರ**ವು ಜೀವಿತಾವಧಿಯವರೆಗೆ (LIFETIME) ಮಾನ್ಯತೆ ಹೊಂದಿದೆ.

ಅಭ್ಯರ್ಥಿಗಳು ದಿನಾಂಕ:26-12-2022 ರಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ https://schooleducation.kar.nic.in ನಲ್ಲಿ ನೀಡಲಾದ ಲಿಂಕ್ ಮೂಲಕ **ತಮ್ಮ ಅರ್ಹತಾ ಪ್ರಮಾಣ ಪತ್ರ**/ಗಣಕೀಕೃತ ಅಂಕಪಟ್ಟಿ (ELIGIBILITY CERTIFICATE) **ಯನ್ನು ಬೇಕಾದಷ್ಟು ಸಂಖ್ಯೆಯಲ್ಲಿ** ಪಡೆದುಕೊಳ್ಳಬಹುದಾಗಿದೆ. ಈ ಪ್ರಮಾಣ ಪತ್ರವು ಸೀಮಿತ ದಿನಗಳಿಗೆ ಮಾತ್ರ ವೆಬ್‌ಸೈಟ್‌ನಲ್ಲಿ ಲಭ್ಯವಿರಲಿದ್ದು, ಅಭ್ಯರ್ಥಿಗಳು ಸಾಕಷ್ಟು ಸಂಖ್ಯೆಯ ಪ್ರತಿಗಳನ್ನು ಡೌನ್‌ಲೋಡ್ ಮಾಡಿಕೊಂಡು ತಮ್ಮಲ್ಲಿ ಸಂರಕ್ಷಿಸಿಕೊಳ್ಳುವುದು. ಈ ಸಂಬಂಧ ಕೇಂದ್ರೀಕೃತ ದಾಖಲಾತಿ ಘಟಕವನ್ನು ಪದೇ ಪದೇ ಸಂಪರ್ಕಿಸುವ ಅಗತ್ಯವಿರುವುದಿಲ್ಲ.

ಪ್ರಮಾಣ ಪತ್ರದಲ್ಲಿ ಮುದ್ರಿತವಾಗಿರುವ **QR Code** ಅನ್ನು ಸ್ಕ್ಯಾನ್ ಮಾಡುವುದರ ಮೂಲಕ ಪ್ರಮಾಣಪತ್ರದ ನೈಜತೆಯನ್ನು ದೃಢೀಕರಿಸಿಕೊಳ್ಳಬಹುದಾಗಿದೆ. 2022ರ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ದಿನಾಂಕ:06/11/2022 ರಂದು ನಿಯಮಾನುಸಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡು ಯಶಸ್ವಿಯಾಗಿ ನಡೆಸಿದ್ದು, ಪರೀಕ್ಷಾ ಫಲಿತಾಂಶವನ್ನು ದಿನಾಂಕ:14/12/2022 ರಂದು ಪ್ರಕಟಿಸಲಾಗಿದೆ. ಪರೀಕ್ಷಾ ನಂತರದ ಪ್ರಕ್ರಿಯೆಯನ್ನು 39 ದಿನಗಳ ಅವಧಿಯಲ್ಲಿ ಪೂರ್ಣಗೊಳಿಸಲಾಗಿದ್ದು, ತೆಗೆದುಕೊಂಡ ಕಾಲಾವಕಾಶವು ಗಣನೀಯವಾಗಿ ಇಳಿಕೆಯಾಗಿದೆ.

ಪ್ರತಿ ಪತ್ರಿಕೆಯಲ್ಲೂ ಒಟ್ಟು ಅಂಕಗಳಿಗೆ ಶೇಕಡಾವಾರು ಫಲಿತಾಂಶವನ್ನು ಲೆಕ್ಕಿಸುವಾಗ ಮೀಸಲಾತಿ ಗುಂಪಿನ ಅಭ್ಯರ್ಥಿಗಳಿಗೆ (ಪ.ಜಾ, ಪ.ಪಂ ಪ್ರವರ್ಗ-1 ಮತ್ತು ವಿಶೇಷ ಚೇತನ) ಶೇ.55 ಹಾಗೂ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಶೇ.60 ಕನಿಷ್ಠ ಅಂಕ ಎಂದು ನಿಗದಿಗೊಳಿಸಿ, ಫಲಿತಾಂಶವನ್ನು ಪ್ರಕಟಿಸಲು ಆದೇಶಿಸಿದೆ.

ಸಹಿ/-
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ